ಪ್ರ.72 (168)

# ಕರ್ನಾಟಕ ವಿಧಾನ ಪರಿಷತ್ತು

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರ ರವರು ನಿಯಮ 72 ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ

**ಗಮನ ಸೆಳೆಯುವ ಸೂಚನೆ:**

ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗ ಇದಕ್ಕೆ ಭಾರತೀಯ ಪಶುವೈದ್ಯಕೀಯ ಪರಿಷತ್ತು ನವದೆಹಲಿ ಇದರ ಕಡ್ಡಾಯ ಮಾನ್ಯತೆ ಪಡೆಯಲು 2ನೇ ಹಂತದ ಕಟ್ಟಡ ಕಾಮಗಾರಿ ಹಾಗೂ ಪ್ರಯೋಗಾಲಯ / ಚಿಕಿತ್ಸಾ ಯಂತ್ರೋಪಕರಣಗಳನ್ನು ಖರೀದಿಸಲು ಅತ್ಯವಶ್ಯಕ ಇರುವ ರೂ. 32.00 ಕೋಟಿ ಅನುದಾನಕ್ಕಾಗಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿದ ಮರುಪ್ರಸ್ತಾವನೆಗೆ ಒಪ್ಪಿಗೆ ನೀಡದಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಆಗುವ ಅನ್ಯಾಯದ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

2017ನೇ ಇಸವಿಯಲ್ಲಿ ಹೊಸದಾಗಿ ಸ್ಥಾಪಿತವಾದಂತಹ ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗ 2ನೇ ಹಂತದ ಕಾಮಗಾರಿಗಳು, ಪೀಠೋಪಕರಣಗಳು, ಶಾಲಾ/ ಪ್ರಯೋಗಶಾಲೆ, ಆಸ್ಪತ್ರೆಯ ಯಂತ್ರೋಪಕರಣಗಳನ್ನು ಸರಿಹೊಂದಿಸಲು ಅತ್ಯಾವಶ್ಯಕವಾಗಿ ಬೇಕಾದಂತಹ ರೂ. 65.00 ಕೋಟಿಗಳ ಅನುದಾನ ಮಂಜೂರಾತಿಗಾಗಿ ಆರ್ಥಿಕ ಇಲಾಖೆಗೆ ಕಳುಹಿಸಲಾಗಿತ್ತು.

ಆದರೆ ಪ್ರಸಕ್ತ ವರ್ಷದಲ್ಲಿ ಹಣಕಾಸಿನ ಲಭ್ಯತೆ ಇರುವುದಿಲ್ಲವೆಂದು ತಿಳಿಸಿದ್ದು ಮತ್ತು ಮುಂದಿನ ಹಣಕಾಸಿನ ವರ್ಷದಲ್ಲಿ ಮರು ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿರುತ್ತದೆ. ಈ ಸಂಬಂಧ ದಿನಾಂಕ: 17.02.2021 ಮತ್ತು 20.02.2021 ರಂದು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಮಾನ್ಯ ಶಾಸಕರು ಗದಗ ಮತಕ್ಷೇತ್ರ ಗದಗ, ಹಾಗೂ ಅಪರ ಮುಖ್ಯ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಇವರ ಸಮ್ಮುಖದಲ್ಲಿ ವಿಶ್ವವಿದ್ಯಾಲಯ ಮತ್ತು ಪಶುಪಾಲನಾ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆಯ ತೀರ್ಮಾನದಂತೆ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಸದ್ಯದ ಪರಿಸ್ಥಿತಿಯಲ್ಲಿ ಸೀಮಿತವಾಗಿ ರೂ. 32.00 ಕೋಟಿಗಳನ್ನು ಮರು ಹೊಂದಾಣಿಕೆ ಮೂಲಕ (Re-appropriation) ಒದಗಿಸಲು ಕೋರಿ ದಿನಾಂಕ: 17.03.2021 ರಂದು ವಿಶ್ವವಿದ್ಯಾಲಯದಿಂದ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತಗೊಂಡಿರುತ್ತದೆ.

ಈ ಸಂಬಂಧ ಗದಗ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿ ಹಾಗೂ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯಗಳಿಗೆ ಅನುಗುಣವಾಗಿ ದಿನಾಂಕ 3-3-2021 ರಂದು ಜರುಗಿದ ವಿಶ್ವವಿದ್ಯಾಲಯದ 96ನೇ ವ್ಯವಸ್ಥಾಪಕ ಮಂಡಳಿ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿ, ನಂತರ ವ್ಯವಸ್ಥಾಪಕ ಮಂಡಳಿಯು ಪಶುವೈದ್ಯಕೀಯ ಮಹಾವಿದ್ಯಾಲಯ ಗದಗಕ್ಕೆ ಭಾರತೀಯ ಪಶುವೈದ್ಯಕೀಯ ಪರಿಷತ್ತು ನವದೆಹಲಿ ಇವರಿಂದ ಮಾನ್ಯತೆ ಪಡೆಯುವ

.....2

ಹಿತದೃಷ್ಟಿಯಿಂದ ಅಗತ್ಯ ಮೂಲಭೂತ ಸೌಕರ್ಯ, ಕಟ್ಟಡ ಕಾಮಗಾರಿ, ಪ್ರಯೋಗಾಲಯದ ಉಪಕರಣ ಖರೀದಿಗೆ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ, ಬೆಂಗಳೂರು ಇಲ್ಲಿ, ಕಾಲು ಬಾಯಿ ರೋಗ ಲಸಿಕಾ ಪ್ರಯೋಗಾಲಯಕ್ಕೆ ಮಂಜೂರಾಗಿ ಉಳಿದಿರುವ ಅನುದಾನ ರೂ. 25.00 ಕೋಟಿಯನ್ನು ಮರು ಹೊಂದಾಣಿಕೆ ಮೂಲಕ ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ನೀಡಲು ಆದ್ಯತೆ ಮೇಲೆ ಕ್ರಮವಹಿಸಲಾಗುವುದು.

ಸಂಖ್ಯೆ: ಪಸಂಮೀ ಇ-62 ಪಲಸೇ 2021

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನ ಸಚಿವರು